# ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀ ಪಿ.ಎಸ್. ರಾಘವೇಂದ್ರ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಶ್ರೀ ಸುನೀಲ್ ಕುಮಾರ್ ಮತ್ತು ಶ್ರೀ ಕುಮಾರಸ್ವಾಮಿ, ಗ್ರಾಮ ಪಂಚಾಯತಿ ಕಾರ್ಯದರ್ಶಿ, ಮುತ್ತಾನಲ್ಲೂರು ಗ್ರಾಮ ಪಂಚಾಯತಿ ಆನೇಕಲ್ ತಾಲ್ಲೂಕು ಇವರುಗಳ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 14-ಎ ಅಡಿಯಲ್ಲಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಬಗ್ಗೆ - ಆದೇಶ.

**ಓದಲಾಗಿದೆ:**

ಉಪ ನಿಬಂಧಕರು, ವಿಚಾರಣೆಗಳು-02, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ ಅ.ಸ.ಪ.ಸಂ.ಕಂಪ್ಲೇಂಟ್/ಉಪಲೋಕ್/ಬಿಸಿಡಿ-3463/2015/ಡಿಆರ್‌ಇ-2 ದಿನಾಂಕ:30-03-2016.

**ಪ್ರಸ್ತಾವನೆ:**

ಮೇಲೆ ಓದಲಾದ ಉಪ ನಿಬಂಧಕರು, ವಿಚಾರಣೆಗಳು-02, ಕರ್ನಾಟಕ ಲೋಕಾಯುಕ್ತ, ಇವರ ಪತ್ರದ ಸಂಗಡ ಕಳುಹಿಸಿರುವ ಮಾನ್ಯ ಉಪಲೋಕಾಯುಕ್ತರು ದಿನಾಂಕ:21-03-2016 ರಂದು ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 12(3)ರ ಅನ್ವಯ ಸಲ್ಲಿಸಿರುವ ವರದಿಯಲ್ಲಿ ಶ್ರೀ ಪಿ.ಎಸ್. ರಾಘವೇಂದ್ರ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಶ್ರೀ ಸುನೀಲ್ ಕುಮಾರ್ ಮತ್ತು ಶ್ರೀ ಕುಮಾರಸ್ವಾಮಿ, ಗ್ರಾಮ ಪಂಚಾಯತಿ ಕಾರ್ಯದರ್ಶಿ, ಮುತ್ತಾನಲ್ಲೂರು ಗ್ರಾಮ ಪಂಚಾಯತಿ ಆನೇಕಲ್ ತಾಲ್ಲೂಕು ಇವರು ಶ್ರೀ ಕೆ.ಶ್ರೀನಿವಾಸ್, ನಾರಾಯಣಪುರ ಗ್ರಾಮ, ಸರ್ಜಾಪುರ ಹೋಬಳಿ, ಆನೇಕಲ್ ತಾಲ್ಲೂಕು, ಬೆಂಗಳೂರು ನಗರ ಜಿಲ್ಲೆ ಇವರು ಮುತ್ತಾನಲ್ಲೂರು ಗ್ರಾಮದಲ್ಲಿರುವ ಪಂಚಾಯತಿಯ ಹಳ್ಳಿಗಳಲ್ಲಿ ಕಂದಾಯ ಜಮೀನುಗಳಲ್ಲಿ ಮುತ್ತಾನಲ್ಲೂರು ಗ್ರಾಮ ಪಂಚಾಯತಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿಯಾದ ಶ್ರೀ ಟಿ.ಎಸ್. ರಾಘವೇಂದ್ರ, ಗ್ರಾಮ ಪಂಚಾಯತಿ ಕಾರ್ಯದರ್ಶಿಯಾದ ಶ್ರೀ ಸುನೀಲ್ ಕುಮಾರ್ ಮತ್ತು ಶ್ರೀ ಕುಮಾರ್‌ಸ್ವಾಮಿ ರವರು ಹಸಿರು ವಲಯದಲ್ಲಿ ಗುರುತಿಸಿರುವ ಬಡಾವಣೆ ಜಮೀನುಗಳಿಗೆ ಅನಧಿಕೃತವಾಗಿ 11ಬಿ ಖಾತೆಗಳನ್ನು ಮಾಡಿಕೊಟ್ಟಿದ್ದು, ಸರ್ಕಾರದಿಂದ ಹಸಿರು ವಲಯದ ಜಮೀನುಗಳಿಗೆ 11ಬಿ ಖಾತೆ ಮಾಡಬಾರದೆಂದು ಆದೇಶವಿದ್ದರೂ ಯಾವುದೇ ಆದೇಶವನ್ನು ಲೆಕ್ಕಿಸದೆ ಸುಮಾರು 500 ರಷ್ಟು ಖಾತೆಗಳನ್ನು ಮಾಡಿಕೊಟ್ಟಿರುವ ಬಗ್ಗೆ ಮಾನ್ಯ ಲೋಕಾಯುಕ್ತರಿಗೆ ದೂರು ನೀಡಿದ್ದು, ಈ ಬಗ್ಗೆ ದಾಖಲೆಗಳು, ವರದಿಗಳು ಮತ್ತು ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಹಾಗೂ ಗ್ರಾಮ ಪಂಚಾಯತಿ ಕಾರ್ಯದರ್ಶಿಗಳ ಹೇಳಿಕೆಗಳನ್ನು ಪರಿಶೀಲಿಸಿದಾಗ ಅನಧಿಕೃತವಾಗಿ ನಮೂನೆ-11ಬಿ ಗಳನ್ನು ವಿತರಿಸಿರುವುದು ಕಂಡು ಬಂದಿದ್ದು, ಶ್ರೀ ಪಿ.ಎಸ್. ರಾಘವೇಂದ್ರ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಶ್ರೀ ಸುನೀಲ್ ಕುಮಾರ್ ಮತ್ತು ಶ್ರೀ ಕುಮಾರಸ್ವಾಮಿ, ಗ್ರಾಮ ಪಂಚಾಯತಿ ಕಾರ್ಯದರ್ಶಿ, ಮುತ್ತಾನಲ್ಲೂರು ಗ್ರಾಮ ಪಂಚಾಯತಿ ಆನೇಕಲ್ ತಾಲ್ಲೂಕು ಇವರುಗಳ ತಮ್ಮ ಕರ್ತವ್ಯ ಪರಿಪಾಲನೆಯಲ್ಲಿ ನಿಷ್ಠೆಯನ್ನು ತೋರದೆ ಕರ್ತವ್ಯಲೋಪವೆಸಗಿ, ದುರ್ವತನೆ ತೋರಿಸಿ, ಸಾರ್ವಜನಿಕ / ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡಿರುವುದುಮೇಲ್ನೋಟಕ್ಕೆ ಕಂಡುಬಂದಿರುವುದರಿಂದ ಹಾಗೂ ಸದರಿಯವರು ಕರ್ನಾಟಕ ನಾಗರೀಕ ಸೇವಾ(ನಡತೆ) ನಿಯಮಗಳು, 1966ರ ನಿಯಮ 3(1) (i) ರಿಂದ (iii)ರ ಅನ್ವಯ ಶಿಸ್ತು ಕ್ರಮಕ್ಕೆ ಬಾಧ್ಯರಾಗಿದ್ದಾರೆಂದು ತಿಳಿಸುತ್ತಾ ಸದರಿಯವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 14-ಎ ರಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲು ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತರ ವರದಿಯನ್ನು ಪರಿಶೀಲಿಸಿ ಈ ಪ್ರಕರಣದಲ್ಲಿ ಒಳಗೊಂಡಿರುವ ನೌಕರರ ವಿರುದ್ಧ ವಿಚಾರಣೆ ನಡೆಸುವುದು ಸೂಕ್ತವೆಂದು ಭಾವಿಸಿ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 14-ಎ ರನ್ವಯ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/192/ಗ್ರಾಪಂಕಾ/2016 ಬೆಂಗಳೂರು, ದಿನಾಂಕ:16-04-2016.**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಪಿ.ಎಸ್. ರಾಘವೇಂದ್ರ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಶ್ರೀ ಸುನೀಲ್ ಕುಮಾರ್ ಮತ್ತು ಶ್ರೀ ಕುಮಾರಸ್ವಾಮಿ, ಗ್ರಾಮ ಪಂಚಾಯತಿ ಕಾರ್ಯದರ್ಶಿ, ಮುತ್ತಾನಲ್ಲೂರು ಗ್ರಾಮ ಪಂಚಾಯತಿ ಆನೇಕಲ್ ತಾಲ್ಲೂಕು ಇವರುಗಳ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957 ರ ನಿಯಮ 11ರ ಅನುಸಾರ ಇಲಾಖಾ ವಿಚಾರಣೆ ನಡೆಸಲು ಸದರಿ ನಿಯಮಗಳ ನಿಯಮ 14-ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ-8ರ ಅಡಿ ಸೂಚಿತವಾದ ಯಾವುದಾದರೊಂದು ಅಥವಾ ಹೆಚ್ಚಿನ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಟಿ.ವಿ. ಅರುಣ್‌ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ,

1. ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತ-1 ರವರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ಉಪ ನಿಬಂಧಕರು, ವಿಚಾರಣೆಗಳು-02, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಬೆಂಗಳೂರು ನಗರ ಜಿಲ್ಲೆ.
5. *ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಆನೇಕಲ್ ತಾಲ್ಲೂಕು, ಬೆಂಗಳೂರು ನಗರ ಜಿಲ್ಲೆ (ಸಂಬಂಧಿಸಿದ ನೌಕರರಿಗೆ ಆದೇಶದ ಪ್ರತಿಯನ್ನು ತಲುಪಿಸಿ ಸರ್ಕಾರಕ್ಕೆ ಸ್ವೀಕೃತಿ ನೀಡುವಂತೆ ಕೋರಿದೆ.)
6. ಶ್ರೀ ಪಿ.ಎಸ್. ರಾಘವೇಂದ್ರ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಮುತ್ತಾನಲ್ಲೂರು ಗ್ರಾಮ ಪಂಚಾಯತಿ ಆನೇಕಲ್ ತಾಲ್ಲೂಕು, ಬೆಂಗಳೂರು ನಗರ ಜಿಲ್ಲೆ.
7. ಶ್ರೀ ಸುನೀಲ್ ಕುಮಾರ್, ಗ್ರಾಮ ಪಂಚಾಯತಿ ಕಾರ್ಯದರ್ಶಿ, ಮುತ್ತಾನಲ್ಲೂರು ಗ್ರಾಮ ಪಂಚಾಯತಿ ಆನೇಕಲ್ ತಾಲ್ಲೂಕು, ಬೆಂಗಳೂರು ನಗರ ಜಿಲ್ಲೆ.
8. ಶ್ರೀ ಕುಮಾರಸ್ವಾಮಿ, ಗ್ರಾಮ ಪಂಚಾಯತಿ ಕಾರ್ಯದರ್ಶಿ, ಮುತ್ತಾನಲ್ಲೂರು ಗ್ರಾಮ ಪಂಚಾಯತಿ ಆನೇಕಲ್ ತಾಲ್ಲೂಕು, ಬೆಂಗಳೂರು ನಗರ ಜಿಲ್ಲೆ.
9. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.